## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ :** ಅಲ್ಪಸಂಖ್ಯಾತರ ಇಲಾಖೆಯಿಂದ ಉತ್ತಮ ಮೂಲಸೌಕರ್ಯ ಹೊಂದಿರುವ 25 ವಿದ್ಯಾರ್ಥಿನಿಲಯಗಳಲ್ಲಿ ಪ್ರತಿ ವಿದ್ಯಾರ್ಥಿನಿಲಯಕ್ಕೆ 25 ಸಂಖ್ಯಾಬಲ ಹೆಚ್ಚಿಸಿ ಆದೇಶ ಹೊರಡಿಸುವ ಕುರಿತು.

**ಓದಲಾಗಿದೆ:** 1. 2018-19ನೇ ಸಾಲಿನ ಆಯವ್ಯಯ **ಭಾಷಣ ಕಂಡಿಕೆ 218.**

2. ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ ಇವರ ಏಕಕಡತ ಸಂಖ್ಯೆ: ಸಂಖ್ಯೆ: ಅಸಂನಿ/ವಿನಿ/ಸಂ.ಬಲ/ಸಿಆರ್-15/ 2018-19 ದಿನಾಂಕ:03.04.2018.

>>>()<<<

ಪ್ರಸ್ತಾವನೆ:-

ಮೇಲೆ ಓದಲಾದ ಕ್ರಮ ಸಂಖ್ಯೆ (1)ರಲ್ಲಿ 2018-19ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಮಾನ್ಯ ಮುಖ್ಯಮಂತ್ರಿಗಳು **ಕಂಡಿಕೆ 218ರಲ್ಲಿ 25 ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಲ್ಲಿ ತಲಾ 25 ದಾಖಲಾತಿ ಸಂಖ್ಯೆ ಹೆಚ್ಚಿಸುವುದು ಎಲ್ಲಾ ಮೆಟ್ರಿಕ್ ಪೂರ್ವ/ನಂತರ ಬಾಲಕಿಯರ ವಿದ್ಯಾರ್ಥಿನಿಲಯಗಳಲ್ಲಿ ಪರಸ್ಪರ ಪ್ರವೇಶ ನೀಡಲಾಗುವುದು. ಐದು ಬಾಲಕರ ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳನ್ನು ಮೇಲ್ದರ್ಜೆಗೇರಿಸಲಾಗುವುದು ಎಂದು ಘೋಷಿಸಿರುತ್ತಾರೆ.**

ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖಾ ವತಿಯಿಂದ 25 ವಿದ್ಯಾರ್ಥಿನಿಲಯಗಳಲ್ಲಿ ಎಲ್ಲಾ ಅಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿದ್ದು, ವಿದ್ಯಾರ್ಥಿನಿಲಯದ ಪ್ರವೇಶಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಅರ್ಜಿಗಳನ್ನು ಸಲ್ಲಿಸುತ್ತಿರುವುದರಿಂದ/ಹೆಚ್ಚಿನ ಬೇಡಿಕೆ ಇರುವುದರಿಂದ ಹಾಗೂ ಮಾನ್ಯ ಮುಖ್ಯಮಂತ್ರಿಗಳ 2018-19ನೇ ಸಾಲಿನಲ್ಲಿ ಆಯವ್ಯಯ ಭಾಷಣದಲ್ಲಿ ಘೋಷಿಸಿರುವಂತೆ ಉತ್ತಮ ಮೂಲಸೌಕರ್ಯ ಹೊಂದಿರುವ 25 ವಿದ್ಯಾರ್ಥಿನಿಲಯಗಳಲ್ಲಿ ಹಾಲಿ ಇರುವ ಸಂಖ್ಯೆಗೆ 25 ವಿದ್ಯಾರ್ಥಿನಿಲಯಗಳಲ್ಲಿ ಸಂಖ್ಯಾಬಲ ಹೆಚ್ಚಿಸಲು ಕೋರಿ ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ, ಬೆಂಗಳೂರು ರವರು ಏಕಕಡತ ಪದ್ಧತಿಯನ್ವಯ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ. ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ ಸರ್ಕಾರವು ಈ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:MWD 274 MDS 2018, ಬೆಂಗಳೂರು, ದಿನಾಂಕ: 25-09-2018**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖಾ ವತಿಯಿಂದ ಕಾರ್ಯನಿರ್ವಹಿಸುತ್ತಿರುವ ಹಾಗೂ ಉತ್ತಮ ಮೂಲಸೌಕರ್ಯ ಹೊಂದಿರುವ ಈ ಕೆಳಕಂಡ 25 ವಿದ್ಯಾರ್ಥಿನಿಲಯಗಳಲ್ಲಿ ವಿದ್ಯಾರ್ಥಿಗಳ ಸಂಖ್ಯಾಬಲವನ್ನು 25 ಹೆಚ್ಚಿಸಿ ಈ ಕೆಳಕಂಡ ಷರತ್ತುಗಳೊಂದಿಗೆ ಸರ್ಕಾರದ ಮಂಜೂರಾತಿ ನೀಡಿ ಆದೇಶಿಸಿದೆ.

| ಕ್ರ. ಸಂ | ಜಿಲ್ಲೆಯ ಹೆಸರು | ವಿದ್ಯಾರ್ಥಿನಿಲಯದ ಹೆಸರು ಮತ್ತು ಸ್ಥಳ | | ಈಗಿರುವ ಸಂಖ್ಯಾ ಬಲ | ಹೆಚ್ಚಿಸ ಲಾಗಿರುವ ಸಂಖ್ಯಾ ಬಲ | ಒಟ್ಟು ಸಂಖ್ಯಾ ಬಲ |
|---|---|---|---|---|---|---|
| 1 | ಬೆಂಗಳೂರು ನಗರ | 1 | ಮೆಟ್ರಿಕ್ ನಂತರ ಬಾಲಕರ ವಿದ್ಯಾರ್ಥಿನಿಲಯ, (ವಿಶ್ವ ವಿದ್ಯಾನಿಲಯ), ಬೆಂಗಳೂರು | 50 | 25 | 75 |
| | | 2 | ಮೆಟ್ರಿಕ್ ನಂತರ ಬಾಲಕಿಯರ ವಿದ್ಯಾರ್ಥಿನಿಲಯ, ವಿಶ್ವೇಶ್ವರ ಲೇಔಟ್, ಬೆಂಗಳೂರು ದಕ್ಷಿಣ | 50 | 25 | 75 |

....2

| | | | | | | |
|---|---|---|---|---|---|---|
| | | 3 | ಮೆಟ್ರಿಕ್ ನಂತರ ಬಾಲಕರ ವಿದ್ಯಾರ್ಥಿನಿಲಯ, ಕೆ.ಆರ್ ಪುರಂ, ಬೆಂಗಳೂರು ಉತ್ತರ | 50 | 25 | 75 |
| | | 4 | ಮೆಟ್ರಿಕ್ ನಂತರ ಬಾಲಕರ ವಿದ್ಯಾರ್ಥಿನಿಲಯ, ದಿಣ್ಣೂರು, ಬೆಂಗಳೂರು ಉತ್ತರ ತಾ॥ | 50 | 25 | 75 |
| | | 5 | ಮೆಟ್ರಿಕ್ ನಂತರ ಬಾಲಕಿಯರ ವಿದ್ಯಾರ್ಥಿನಿಲಯ, ಉತ್ತರಹಳ್ಳಿ, ಬೆಂಗಳೂರು ದಕ್ಷಿಣ ತಾ॥ | 50 | 25 | 75 |
| | ಬೆಂಗಳೂರು ನಗರ | 6 | ಮೆಟ್ರಿಕ್ ನಂತರ ಬಾಲಕರ ವಿದ್ಯಾರ್ಥಿನಿಲಯ, ಮಲತ್ತಹಳ್ಳಿ, ಬೆಂಗಳೂರು ದಕ್ಷಿಣ ತಾ॥ | 50 | 25 | 75 |
| 2 | ಬೀದರ್ | 7 | ಮೆಟ್ರಿಕ್ ನಂತರ ಬಾಲಕರ ವಿದ್ಯಾರ್ಥಿನಿಲಯ, ನೌಬಾದ್ | 50 | 25 | 75 |
| 3 | ಬೆಳಗಾವಿ | 8 | ಮೆಟ್ರಿಕ್ ನಂತರ ಬಾಲಕಿಯರ ವಿದ್ಯಾರ್ಥಿನಿಲಯ-1 ಸುಭಾಷನಗರ, ಬೆಳಗಾವಿ | 75 | 25 | 100 |
| | | 9 | ಮೆಟ್ರಿಕ್ ನಂತರ ಬಾಲಕಿಯರ ವಿದ್ಯಾರ್ಥಿನಿಲಯ-2 ಸುಭಾಷನಗರ, ಬೆಳಗಾವಿ | 75 | 25 | 100 |
| 4 | ಬಳ್ಳಾರಿ | 10 | ಮೆಟ್ರಿಕ್ ನಂತರ ಬಾಲಕರ ವಿದ್ಯಾರ್ಥಿನಿಲಯ, ಸಿರಗುಪ್ಪ | 50 | 25 | 75 |
| 5 | ದಕ್ಷಿಣ ಕನ್ನಡ | 11 | ಮೆಟ್ರಿಕ್ ನಂತರ ಬಾಲಕರ ವಿದ್ಯಾರ್ಥಿನಿಲಯ, ಮಂಗಳೂರು ನಗರ | 50 | 25 | 75 |
| 6 | ಧಾರವಾಡ | 12 | ಮೆಟ್ರಿಕ್ ನಂತರ ಬಾಲಕಿಯರ ವಿದ್ಯಾರ್ಥಿನಿಲಯ, ಟಿ.ಸಿ.ಡಬ್ಲ್ಯೂ, ಧಾರವಾಢ | 80 | 20 | 100 |
| | | 13 | ಮೆಟ್ರಿಕ್ ನಂತರ ಬಾಲಕರ ವಿದ್ಯಾರ್ಥಿನಿಲಯ, ಧಾರವಾಢ ನಗರ | 50 | 25 | 75 |
| 7 | ಗದಗ | 14 | ಮೆಟ್ರಿಕ್ ನಂತರ ಬಾಲಕರ ವಿದ್ಯಾರ್ಥಿನಿಲಯ, ಗದಗ | 50 | 25 | 75 |
| | | 15 | ಮೆಟ್ರಿಕ್ ನಂತರ ಬಾಲಕಿಯರ ವಿದ್ಯಾರ್ಥಿನಿಲಯ, ಗದಗ | 50 | 25 | 75 |
| 8 | ಕಲಬುರಗಿ | 16 | ಮೆಟ್ರಿಕ್ ನಂತರ ಬಾಲಕಿಯರ ವಿದ್ಯಾರ್ಥಿನಿಲಯ, (89/1) ಕೆ.ಎಸ್.ಜಡ್-1, ಕಲಬುರಗಿ | 75 | 25 | 100 |
| | | 17 | ಮೆಟ್ರಿಕ್ ಪೂರ್ವ ಬಾಲಕಿಯರ ವಿದ್ಯಾರ್ಥಿನಿಲಯ, ತಾವರಗೆರ, ಕಲಬುರಗಿ | 50 | 25 | 75 |
| 9 | ಹಾವೇರಿ | 18 | ಮೆಟ್ರಿಕ್ ನಂತರ ಬಾಲಕರ ವಿದ್ಯಾರ್ಥಿನಿಲಯ, ರಾಣಿಬೆನ್ನೂರು, ಹಾವೇರಿ | 50 | 25 | 75 |
| 10 | ತುಮಕೂರು | 19 | ಮೆಟ್ರಿಕ್ ನಂತರ ಬಾಲಕರ ವಿದ್ಯಾರ್ಥಿನಿಲಯ, ಮೇಲೆಕೋಟೆ-2 (ವೃತ್ತಿಪರ), ತುಮಕೂರು | 50 | 25 | 75 |
| | | 20 | ಮೆಟ್ರಿಕ್ ನಂತರ ಬಾಲಕಿಯರ ವಿದ್ಯಾರ್ಥಿನಿಲಯ, ಮೇಲೆಕೋಟೆ-2 (ವೃತ್ತಿಪರ), ತುಮಕೂರು | 50 | 25 | 75 |
| | | 21 | ಮೆಟ್ರಿಕ್ ನಂತರ ಬಾಲಕರ ವಿದ್ಯಾರ್ಥಿನಿಲಯ, ಬಡ್ಡಿಹಳ್ಳಿ, ತುಮಕೂರು | 50 | 25 | 75 |
| 11 | ಕೊಪ್ಪಳ | 22 | ಮೆಟ್ರಿಕ್ ನಂತರ ಬಾಲಕಿಯರ ವಿದ್ಯಾರ್ಥಿನಿಲಯ, ಗಂಗಾವತಿ, ಕೊಪ್ಪಳ | 50 | 25 | 75 |
| | | 23 | ಮೆಟ್ರಿಕ್ ನಂತರ ಬಾಲಕಿಯರ ವಿದ್ಯಾರ್ಥಿನಿಲಯ, ಕೊಪ್ಪಳ ನಗರ | 50 | 25 | 75 |
| 12 | ಯಾದಗಿರಿ | 24 | ಮೆಟ್ರಿಕ್ ನಂತರ ಬಾಲಕಿಯರ ವಿದ್ಯಾರ್ಥಿನಿಲಯ, ಯಾದಗಿರಿ ನಗರ | 50 | 25 | 75 |
| | | 25 | ಮೆಟ್ರಿಕ್ ನಂತರ ಬಾಲಕಿಯರ ವಿದ್ಯಾರ್ಥಿನಿಲಯ, ಶಹಾಪುರ, ಯಾದಗಿರಿ | 50 | 25 | 75 |

....3